**ದಿನಾಂಕಃ 02.12.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ವಕೀಲರಿಂದಃ**

ನನಗೆ ಈಗ 43 ವರ್ಷ ವಯಸ್ಸು. ಅಪಘಾತವಾದ ನಂತರ ನನಗೆ ಪ್ರಜ್ಞೆ ಇತ್ತು. ನಾನು ಆ ದಿನ ಚಾಲನೆ ಮಾಡುತ್ತಿದ್ದ ದ್ವಿಚಕ್ರ ವಾಹನ ನನ್ನ ಹೆಸರಿನಲ್ಲಿದೆ. ಅಪಘಾತವಾದ ಮೂರು ದಿನಗಳ ನಂತರ ದೂರು ದಾಖಲಿಸಿರುತ್ತೀರಿ ಎಂದರೆ ಸಾಕ್ಷಿಯು ನಾನು ಚಿಕಿತ್ಸೆ ಪಡೆಯುತ್ತಿದ್ದ ಕಾರಣ ಮೂರು ದಿನಗಳ ನಂತರ ದೂರು ದಾಖಲಿಸಿದೆನು ಎಂದು ನುಡಿಯುತ್ತಾರೆ. ಮೂರು ದಿನ ತಡವಾಗಿ ದೂರು ದಾಖಲಿಸಿದ ಕಾರಣ 1 ನೇ ಎದುರುದಾರರ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿದ್ದೀರಾ ಎಂದರೆ ಸರಿಯಲ್ಲ. 1 ನೇ ಎದುರುದಾರರನ್ನು ತಪ್ಪಾಗಿ ಪ್ರಕರಣಕ್ಕೆ ಸೇರಿಸಿರುವ ಕಾರಣ 2 ನೇ ಎದುರುದಾರರ ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಮುಂದಿನ ದಿನಗಳಲ್ಲಿ ನಿಮಗೆ ಯಾವುದೇ ರೀತಿಯ ವೈದ್ಯಕೀಯ ಖರ್ಚುಗಳು ಬರುವುದಿಲ್ಲ ಎಂದರೆ ಅದನ್ನು ಹೇಳಲು ಬರುವುದಿಲ್ಲ ಎಂದು ನುಡಿಯುತ್ತಾರೆ. ನೀವು ವೈದ್ಯಕೀಯ ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿರುತ್ತೀರಿ ಎಂದರೆ ಸರಿಯಲ್ಲ. ನಾನು 6 ತಿಂಗಳವರೆಗು ವೃತ್ತಿಯಲ್ಲಿ ಮುಂದುವರೆದಿರಲಿಲ್ಲ ಎಂದು ತೋರಿಸಲು ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಈ ಮೊದಲು ಕೆಲಸ ಮಾಡುತ್ತಿದ್ದ ಕಚೇರಿಯಲ್ಲಿಯೇ ಈಗಲೂ ಸಹ ಕೆಲಸ ಮಾಡುತ್ತಿದ್ದೀರಿ ಎಂದರೆ ಸರಿ. ಅಪಘಾತದಿಂದುಂಟಾದ ಎಲ್ಲಾ ಗಾಯಗಳು ಗುಣಮುಖ ಹೊಂದಿರುವ ಕಾರಣ ದಿನನಿತ್ಯದ ಕೆಲಸದಲ್ಲಿ ನಿಮಗೆ ಯಾವುದೇ ರೀತಿಯ ತೊಂದರೆ ಉಂಟಾಗುವುದಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆದುಕೊಳ್ಳಲು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**( ಶ್ರೀಮತಿ. ನಿರ್ಮಲ ಎಂ.ಸಿ)**
ಎಸಿಜೆಎಂ ನ್ಯಾಯಾಧೀಶರು
ಲಘು ವ್ಯವಹಾರಗಳ ನ್ಯಾಯಾಲಯ
ಬೆಂಗಳೂರು.